ಶ್ರೀ ವೀರಕುಮಾರ ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ಗುಂಡ್ಲುಪೇಟೆ ತಾಲ್ಲೂಕಿನಲ್ಲಿ ಅಕ್ರಮ ಸಕ್ರಮ ಯೋಜನೆಯಡಿ ದಿನಾಂಕ 1.7.2000 ದಿಂದ 15.10.2000 ದವರೆಗೆ ಒಟ್ಟು 384 ಅನಧಿಕೃತ ನೀರಾವರಿ ಪಂಪ್ ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ. ಸಮರ್ಪಕವಾಗಿ ವಿದ್ಯುತ್ ಒದಗಿಸುವ ಸಲುವಾಗಿ ಹೆಚ್ಚುವರಿ ವಿತರಣಾ ಟ್ರಾನ್ಸ್‌ಫಾರ್ಮರ್ ಹಾಗೂ ವಿದ್ಯುತ್ ಲೈನ್‌ಗಳ ನಿರ್ಮಾಣ ಕಾರ್ಯವನ್ನು ಹಂತ ಹಂತವಾಗಿ ಕೈಗೊಳ್ಳಲು ಉದ್ದೇಶಿಸಿದೆ.

ಆ) ತೆರಕಣಾಂಬಿಯಲ್ಲಿರುವ 33 : 11 ಕೆ.ವಿ. ಉಪಕೇಂದ್ರವನ್ನು 66 : 11 ಕೆ.ವಿ. ಉಪ ಕೇಂದ್ರವನ್ನಾಗಿ ಪರಿವರ್ತಿಸುವ ಬಗ್ಗೆ ಪ್ರಸ್ತಾವನೆಯು ಪ್ರಸ್ತುತ ಇರುವುದಿಲ್ಲ.

ಇ) ಇದು ಉದ್ಭವಿಸುವುದಿಲ್ಲ.

ವಾಣಿಜ್ಯ ತೆರಿಗೆ ಇಲಾಖೆಯ ಕಟ್ಟಡಗಳು

3268 - ಶ್ರೀ ಬಿ.ಆರ್. ನೀಲಕಂಠಪ್ಪ (ತರೀಕೆರೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ಇರುವ ಸ್ವಂತ ಕಟ್ಟಡಗಳ ಸಂಖ್ಯೆ ಎಷ್ಟು?

ಆ) ರಾಜ್ಯದಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಇರುವ ವಾಣಿಜ್ಯ ತೆರಿಗೆ ಇಲಾಖೆಯ ಕಛೇರಿಗಳ ಸಂಖ್ಯೆ ಎಷ್ಟು?

ಇ) ಬಾಡಿಗೆ ಕಟ್ಟಡಗಳಲ್ಲಿ ಪ್ರತಿ ತಿಂಗಳು ಸಂದಾಯ ಮಾಡುತ್ತಿರುವ ಬಾಡಿಗೆ ಹಣ ಎಷ್ಟು?

ಈ) ಬಾಡಿಗೆ ಕಟ್ಟಡಗಳ ಬದಲು ಸ್ವಂತ ಕಟ್ಟಡ ಹೊಂದುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) 32.

ಆ) 114.

ಇ) ರೂ. 32,15,634.00

ಈ) ಇದೆ. ರಾಜ್ಯದ ವಿವಿಧ ಸ್ಥಳಗಳಲ್ಲಿ ವಾಣಿಜ್ಯ ತೆರಿಗೆ ಇಲಾಖೆಯ ಕಛೇರಿಗಳಿಗಾಗಿ 18 ಕಟ್ಟಡ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿವೆ.

ತರೀಕೆರೆ ತಾಲ್ಲೂಕು ಶಿವನಿ, ಲಕ್ಕವಳ್ಳಿ ಗ್ರಾಮಗಳಿಗೆ MUSS ಘಟಕಗಳ ಸ್ಥಾಪನೆ

3269 - ಶ್ರೀ ಬಿ.ಆರ್. ನೀಲಕಂಠಪ್ಪ (ತರೀಕೆರೆ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತರೀಕೆರೆ ತಾಲ್ಲೂಕಿನ 1. ಶಿವನಿ, 2. ಲಕ್ಕವಳ್ಳಿ 3. ಅಮೃತಾಪುರ (ನೇರಳೆಕೆರೆ) ಗ್ರಾಮಗಳಿಗೆ ಎಂ.ಯು.ಎಸ್.ಎಸ್. ಘಟಕಗಳನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ?